ನಿ- 330
8/13

# ಕರ್ನಾಟಕ ವಿಧಾನ ಪರಿಷತ್ತು

ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಹಾಗೂ ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ ಇವರುಗಳು "ಚಿಕ್ಕಬಳ್ಳಾಪುರ ಜಿಲ್ಲೆ, ಚಿಂತಾಮಣಿ ತಾಲ್ಲೂಕು, ಕೋಟಗಲ್ ಗ್ರಾಮದ ಸ.ನಂ 56ರಲ್ಲಿ ಜಿ.ಟಿ.ಬಿ ಕ್ರಷರ್ಸ್ ಇವರು ಸ್ಥಳೀಯ ಕಂದಾಯ ಇಲಾಖೆಯ ಅಧಿಕಾರಿಗಳೊಂದಿಗೆ ಶಾಮೀಲಾಗಿ ಸರ್ಕಾರ ನೀಡಿದ ಮಂಜೂರಾತಿಗಿಂತ ಹೆಚ್ಚು ಸರ್ಕಾರಿ ಜಮೀನನ್ನು ಒತ್ತುವರಿ ಮಾಡಿಕೊಂಡು, ಸದರಿ ಒತ್ತುವರಿ ಜಾಗದಲ್ಲಿ ಕಾನೂನು ಬಾಹಿರವಾಗಿ, ಅನಧಿಕೃತವಾಗಿ ಷೆಡ್ ಹಾಗೂ ಬೇಲಿಯನ್ನು ನಿರ್ಮಿಸಿ, ಗಣಿಗಾರಿಕೆಯಲ್ಲಿ ತೊಡಗಿಸಿಕೊಂಡು, ಸರ್ಕಾರದ ಬೊಕ್ಕಸಕ್ಕೆ ನಷ್ಟ ಮಾಡುತ್ತಿರುವ ಗಂಭೀರ ಸಮಸ್ಯೆ ಕುರಿತು" ನಿಯಮ 330 ರಡಿಯಲ್ಲಿ ಗಮನ ಸೆಳೆಯುವ ಸೂಚನೆಗೆ ಮಾನ್ಯ ಕಂದಾಯ ಸಚಿವರ ಹೇಳಿಕೆ:

*****

ಚಿಕ್ಕಬಳ್ಳಾಪುರ ಜಿಲ್ಲೆ, ಚಿಂತಾಮಣಿ ತಾಲ್ಲೂಕು ಕೋಟಗಲ್ ಗ್ರಾಮದ ಸರ್ವೆ ನಂ.56ರಲ್ಲಿ ಯಾವುದೇ ಕಲ್ಲು ಗಣಿ ಗುತ್ತಿಗೆ ಹಾಗೂ ಕ್ರಷರ್ ಘಟಕಗಳಿಗೆ ಅನುಮತಿ ನೀಡಿರುವುದಿಲ್ಲ.

ಮುಂದುವರೆದು, ಚಿಕ್ಕಬಳ್ಳಾಪುರ ಜಿಲ್ಲೆ, ಚಿಂತಾಮಣಿ ತಾಲ್ಲೂಕು ಕೋಟಗಲ್ ಗ್ರಾಮದ ಸ.ನಂ 56ರ ಆರ್.ಟಿ.ಸಿ ಪಹಣಿಯಂತೆ 5-24 ಎಕರೆ/ಗುಂಟೆ ಊರು ಮಾದಿಗ ಇನಾಂತಿ ಎಂದು ನಮೂದಾಗಿದ್ದು, ಸದರಿ ಪ್ರದೇಶದಲ್ಲಿ ಅಕ್ರಮ ಗಣಿಗಾರಿಕೆ ನಡೆಯುತ್ತಿರುವುದಿಲ್ಲ ಹಾಗೂ ಒತ್ತುವರಿ ಆಗಿರುವುದಿಲ್ಲ.

(ಆರ್.ಅಶೋಕ)
ಕಂದಾಯ ಸಚಿವರು

ಸಂಖ್ಯೆ: ಆರ್‌ಡಿ 13 ಎಲ್‌ಜಿಕ್ಯೂ 2022.